**All India Radio: Bangalore**
**Regional Bulletin In Kannada**
**27.09.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ಧಾರವಾಡ ಐಐಟಿಯ ವಿಸ್ತರಣಾ ಮೂಲ ಸೌಕರ್ಯಕ್ಕೆ ವಿಡಿಯೋ ಕಾನ್ಫರೆನ್ಸ್ ಮೂಲಕ ಪ್ರಧಾನಿ ಚಾಲನೆ
2. ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರು ನಗರ ಪ್ರದಕ್ಷಿಣೆ - ಕರ್ತವ್ಯ ಲೋಪವೆಸಗಿದ ಗುತ್ತಿಗೆದಾರರು, ಇಂಜಿನಿಯರ್‌ಗಳ ವಿರುದ್ಧ ಕ್ರಮಕ್ಕೆ ಸೂಚನೆ
3. ಸಿಂಧನೂರಿನಲ್ಲಿ ವಿವಿಧ ಇಲಾಖೆಗಳ ಕಟ್ಟಡಗಳ ಉದ್ಘಾಟನೆ ಹಾಗೂ ಶಂಕು ಸ್ಥಾಪನೆ
4. ಬೆಂಬಲ ಬೆಲೆಯಡಿ ಸೂರ್ಯಕಾಂತಿ, ಹೆಸರುಕಾಳು, ಉದ್ದಿನಕಾಳು ಖರೀದಿಸಲು ಜಿಲ್ಲಾಡಳಿತಗಳಿಂದ ಸಿದ್ಧತೆ.
5. ಯಾದಗಿರಿ ಜಿಲ್ಲೆಯಲ್ಲಿ ವಾಡಿಕೆಗಿಂತ ಹೆಚ್ಚು ಮಳೆ : ರಾಜ್ಯದ ಉತ್ತರ ಒಳನಾಡಿನಲ್ಲಿ ಆರೆಂಜ್ ಅಲರ್ಟ್ ಘೋಷಣೆ

<><><><>

ಭಾರತೀಯ ತಂತ್ರಜ್ಞಾನ ಸಂಸ್ಥೆ ಧಾರವಾಡದಲ್ಲಿ ಹಂತ-ಬಿ ಮೂಲಸೌಕರ್ಯಕ್ಕೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ವಿಡಿಯೋ ಕಾನ್ಫರೆನ್ಸ್ ಮೂಲಕ ಶಂಕುಸ್ಥಾಪನೆ ನೆರವೇರಿಸಿದರು. ಪ್ರಧಾನಮಂತ್ರಿ ನರೇಂದ್ರ ಮೋದಿ ಮಾತನಾಡಿ, ದೇಶದ ಉನ್ನತ ಶಿಕ್ಷಣ ವಲಯ ಮತ್ತು ಸಂಶೋಧನಾ ಮೂಲಸೌಕರ್ಯವನ್ನು ಬಲಪಡಿಸಲು ಕೇಂದ್ರ ಸರ್ಕಾರದ ನಿರಂತರ ಬದ್ಧತೆಯನ್ನು ಪ್ರತಿಪಾದಿಸಿದರು.

**ಧ್ವನಿ : ಪ್ರಧಾನಮಂತ್ರಿ ನರೇಂದ್ರ ಮೋದಿ**

ಹಂತ-ಬಿ ಯೋಜನೆಯಡಿ, ಕ್ಯಾಂಪಸ್‌ನಲ್ಲಿ ಶೈಕ್ಷಣಿಕ, ಸಂಶೋಧನಾ, ಹಾಸ್ಟೆಲ್, ನಿವಾಸ ಮತ್ತು ಸಮುದಾಯ ಮೂಲಸೌಕರ್ಯ ವಿಸ್ತಾರವಾಗಲಿವೆ. ಅಭಿವೃದ್ಧಿಗೊಂಡ ಸಾಮರ್ಥ್ಯದೊಂದಿಗೆ ಐಐಟಿ ಧಾರವಾಡದಲ್ಲಿ ಯುಜಿ, ಪಿಜಿ ಹಾಗೂ ಪಿ.ಎಚ್.ಡಿ. ಕಾರ್ಯಕ್ರಮಗಳಲ್ಲಿ ೨ ಸಾವಿರದ ೫೦೦ಕ್ಕೂ ಹೆಚ್ಚು ವಿದ್ಯಾರ್ಥಿಗಳನ್ನು ನಿರ್ವಹಿಸಲು ಸಾಧ್ಯವಾಗಲಿದೆ. ಇದಕ್ಕೆ ೧೫೦ಕ್ಕೂ ಹೆಚ್ಚು ಪ್ರಾಧ್ಯಾಪಕರು ಹಾಗೂ ೧೨೦ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರು ಸಹಕಾರ ನೀಡಲಿದ್ದಾರೆ. ಈ ವಿಸ್ತರಣೆ ಕೇವಲ ಸಂಸ್ಥೆಯ ಶೈಕ್ಷಣಿಕ ಮತ್ತು ಸಂಶೋಧನಾ ಸಾಮರ್ಥ್ಯವನ್ನು ವೃದ್ಧಿಸುವುದಲ್ಲದೆ,

ಸ್ಟಾರ್ಟ್‌ಅಪ್ಸ್, ಸ್ಥಳೀಯ ಕೈಗಾರಿಕೆಗಳು ಮತ್ತು ವಿಶಾಲ ಸಮುದಾಯಕ್ಕೂ ಸಂಶೋಧನಾ ಒಪ್ಪಂದ, ನವೀನತೆ ಮತ್ತು ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳ ಮೂಲಕ ಪ್ರಯೋಜನ ನೀಡಲಿದೆ.

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಬೆಂಗಳೂರು ನಗರ ಪ್ರದಕ್ಷಿಣೆಯ ನಿಮಿತ್ತ ಹೆಣ್ಣೂರಿನ ಬಾಗಲೂರು ರಸ್ತೆಯ ವೈಟ್ ಟಾಪಿಂಗ್ ಕಾಮಗಾರಿಯನ್ನು ಪರಿಶೀಲನೆ ನಡೆಸಿದರು. ವೈಟ್ ಟಾಪಿಂಗ್ ಅಡಿ ಅಭಿವೃದ್ಧಿಪಡಿಸಲಾದ ರಸ್ತೆಗಳಲ್ಲಿ ಗುಂಡಿಗಳು ಬಿದ್ದರೆ ಅದರ ಹೊಣೆಯನ್ನು ಗುತ್ತಿಗೆದಾರರೇ ಹೊರಬೇಕಿದೆ. ಹಾಗೂ ಈ ಅವಧಿಯಲ್ಲಿ ಗುತ್ತಿಗೆದಾರರೇ ರಸ್ತೆಗಳ ನಿರ್ವಹಣೆ ಮಾಡಬೇಕು ಎಂಬ ನಿಯಮವಿದೆ. ಆದರೆ ಬಾಗಲೂರು ರಸ್ತೆಯ ಸಮರ್ಪಕ ನಿರ್ವಹಣೆ ಮಾಡದ ಹಿನ್ನೆಲೆಯಲ್ಲಿ ವೈಟ್ ಟಾಪಿಂಗ್ ಗುತ್ತಿಗೆದಾರರು ಮತ್ತು ಎಂಜಿನಿಯರ್ ಗಳ ವಿರುದ್ಧ ಸೂಕ್ತ ಕ್ರಮಕ್ಕೆ ಸೂಚನೆ ನೀಡಿದರು. ನಾಗವಾರದಲ್ಲಿರುವ ಘನ ತ್ಯಾಜ್ಯ ಸಂಗ್ರಹಣಾ ಕೇಂದ್ರಕ್ಕೆ ಭೇಟಿ ನೀಡಿ, ತ್ಯಾಜ್ಯ ನಿರ್ವಹಣಾ ವ್ಯವಸ್ಥೆಯ ಪರಿಶೀಲನೆ ನಡೆಸಿದರು. ಹೊರ ಭಾಗದಲ್ಲಿ ರಾಶಿ ರಾಶಿಯಾಗಿ ಕಸ ಬಿದ್ದಿರುವುದನ್ನು ಗಮನಿಸಿ, ಮುಖ್ಯ ಎಂಜಿನಿಯರ್ ಪ್ರಹ್ಲಾದ್ ಹಾಗೂ ರಾಘವೇಂದ್ರ ಪ್ರಸಾದ್ ಅವರಿಗೆ ನೋಟಿಸ್ ನೀಡುವಂತೆ ಸೂಚಿಸಿದರು. ಹೆಬ್ಬಾಳ ಸಮೀಪ ಮೆಟ್ರೋ ಕಾಮಗಾರಿ ವೇಳೆ ಬಿಎಂಆರ್‌ಸಿಎಲ್ ಸರ್ವೀಸ್ ರಸ್ತೆಗಳ ಬಗ್ಗೆ ನಿರ್ಲಕ್ಷ್ಯ ವಹಿಸಿರುವುದು, ರಸ್ತೆ ಬದಿ ನೀರು ನಿಲ್ಲುವಂತೆ ಮಾಡಿರುವುದು, ಹಾಗೂ ವೈಟ್ ಟಾಪಿಂಗ್ ರಸ್ತೆ ಹಾಳು ಮಾಡಿರುವುದನ್ನು ಗಮನಿಸಿ, ತಕ್ಷಣವೇ ಸರ್ವೀಸ್ ರಸ್ತೆ ನಿರ್ವಹಣೆ ಮತ್ತು ಚರಂಡಿ ದುರಸ್ತಿ ಮಾಡುವಂತೆ ಸೂಚನೆ ನೀಡಿದರು. ವಿಂಡ್ಸರ್ ಮ್ಯಾನರ್ ಸಮೀಪ ರಸ್ತೆಯ ಮೇಲೆ ಮಳೆ ನೀರಿನ ಸರಾಗ ಹರಿವಿಗೆ ಸೂಕ್ತ ಒಳಚರಂಡಿ ವ್ಯವಸ್ಥೆ ಮಾಡುವಂತೆ ನಿರ್ದೇಶನ ನೀಡಿದರು.

**ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ**

<><><><>

ರಾಯಚೂರಿನ ಸಿಂಧನೂರು ತಾಲೂಕಿನಲ್ಲಿಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹಾಗೂ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಆರೋಗ್ಯ ಇಲಾಖೆ, ಕರ್ನಾಟಕ ಗೃಹಮಂಡಳಿ, ಕೆಆರ್ ಐ ಡಿಎಲ್ ಸೇರಿದಂತೆ ವಿವಿಧ ಇಲಾಖೆಗಳ ಕಟ್ಟಡಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದರು. ೧೫ ಕೋಟಿ ರೂಪಾಯಿ ವೆಚ್ಚದಲ್ಲಿ ಸಿಂಧನೂರು ನಗರದ ಪಿ.ಡಬ್ಲ್ಯೂಡಿ ಕ್ಯಾಂಪಿನಲ್ಲಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಮತ್ತು ೧ ಕೋಟಿ ೫ ಲಕ್ಷ ರೂಪಾಯಿ ವೆಚ್ಚದಲ್ಲಿ ಸಿಂಧನೂರು ನಗರದಲ್ಲಿ ನೂತನ ತಾಲೂಕು ಪಂಚಾಯತ್ ಕಾರ್ಯಾಲಯಕ್ಕೆ ಶಂಕು ಸ್ಥಾಪನೆ ನೆರವೇರಿಸಿದರು. ಈ ವೇಳೆ ಮಾತನಾಡಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ , ರಾಜ್ಯ ಸರ್ಕಾರವು ಆರೋಗ್ಯ ಕ್ಷೇತ್ರದ ಬೆಳವಣಿಗೆಯ ಬಗ್ಗೆ ವಿಶೇಷ ಗಮನ ಹರಿಸಿದ್ದು, ಈ

ನಿಟ್ಟಿನಲ್ಲಿ ರಾಯಚೂರು ಜಿಲ್ಲೆಯಲ್ಲಿ ಹೊಸದಾಗಿ ೧೬ ಆರೋಗ್ಯ ಕೇಂದ್ರಗಳಿಗೆ ಮಂಜೂರಾತಿ ನೀಡಲಾಗಿದೆ ಎಂದು ತಿಳಿಸಿದ್ದಾರೆ. ಲಿಂಗಸೂಗೂರಿನಲ್ಲಿ ೨೧ ಕೋಟಿ ರೂಪಾಯಿ ವೆಚ್ಚದಲ್ಲಿ ಕ್ರಿಟಿಕಲ್ ಕೇರ್ ಯುನಿಟ್ ಸ್ಥಾಪನೆಗೆ ಮಂಜೂರಾತಿ ದೊರೆತಿದೆ. ಸಿಂಧನೂರು ತಾಲೂಕಿನಲ್ಲಿ ತಾಯಿ ಮಕ್ಕಳ ಆಸ್ಪತ್ರೆ ಆರಂಭ ಮಾಡಲಾಗಿದ್ದು ಜಿಲ್ಲೆಗೆ ೧೬ ಆರೋಗ್ಯ ಸೇವೆ ನೀಡುತ್ತಿದ್ದೇವೆ ಎಂದು ತಿಳಿಸಿದ್ದಾರೆ.

<><><><>

ಮುಂಗಾರು ಹಂಗಾಮಿನಲ್ಲಿ ಕೇಂದ್ರ ಸರ್ಕಾರ ಬೆಂಬಲ ಬೆಲೆ ಘೋಷಿಸಿರುವ ಎಫ್ಎಕ್ಯೂ ಗುಣಮಟ್ಟದ ಸೂರ್ಯಕಾಂತಿ ಉತ್ಪನ್ನವನ್ನು ಪ್ರತಿ ಕ್ವಿಂಟಾಲ್‌ಗೆ ೭ ಸಾವಿರದ ೭೨೧ ರೂಪಾಯಿ ಬೆಂಬಲ ಬೆಲೆಯಡಿ ಖರೀದಿಗೆ ರೈತರ ನೊಂದಣಿಯನ್ನು ೮೦ ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು ೯೦ ದಿನಗಳವರೆಗೆ ನಿಗದಿಪಡಿಸಲಾಗಿದೆ. ನೊಂದಣಿ ಕಾರ್ಯದ ಜೊತೆಗೆ ಖರೀದಿ ಪ್ರಕ್ರಿಯೆ ಪ್ರಾರಂಭಿಸಲು ವಿಜಯಪುರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಕನಿಷ್ಠ ಬೆಂಬಲ ಬೆಲೆ ಕಾರ್ಯಪಡೆ ಸಮಿತಿ ಸಭೆಯಲ್ಲಿ ನಿರ್ಧರಿಸಲಾಗಿದೆ. ಬೆಂಬಲ ಬೆಲೆಯಡಿ ಸೂರ್ಯಕಾಂತಿ ಉತ್ಪನ್ನ ಖರೀದಿಗಾಗಿ ಜಿಲ್ಲೆಯ ಬಬಲೇಶ್ವರ, ಸವನಹಳ್ಳಿ, ಬೆಳ್ಳುಬ್ಬಿ, ತಾಜಪುರ, ವಿಜಯಪುರ, ತಂಗಡಗಿ, ಚಡಚಣ, ಹಲಸಂಗಿ, ಸಿಂದಗಿ, ಬಸವನಬಾಗೇವಾಡಿ ಹಾಗೂ ಮುದ್ದೇಬಿಹಾಳ ಸೇರಿದಂತೆ ಒಟ್ಟು ೧೧ ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ.

<><><><>

೨೦೨೫-೨೬ ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ. ಗುಣಮಟ್ಟದ ಹೆಸರು ಕಾಳು ಉತ್ಪನ್ನವನ್ನು ಪ್ರತಿ ಕ್ವಿಂಟಾಲ್‌ಗೆ ೮ ಸಾವಿರ ೭೬೮ ಹಾಗೂ ಉದ್ದಿನಕಾಳು ಉತ್ಪನ್ನವನ್ನು ೭ ಸಾವಿರದ ೮೦೦ ರಂತೆ ಧಾರವಾಡ ಜಿಲ್ಲೆಯ ರೈತರಿಂದ ಮಾತ್ರ ಖರೀದಿಸಲು ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ. ಜಿಲ್ಲೆಯ ರೈತರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ. ಉತ್ಪನ್ನವನ್ನು ಖರೀದಿಸಲು ರೈತರ ನೋಂದಣಿಯು ೮೦ ದಿನಗಳವರೆಗೆ ಹಾಗೂ ಖರೀದಿ ಅವಧಿ ೯೦ ದಿನಗಳವರೆಗೆ ನಡೆಯಲಿದೆ ಎಂದು ಅವರು ಹೇಳಿದ್ದಾರೆ.

<><><><>

ಯಾದಗಿರಿ ಜಿಲ್ಲೆಯಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗಿದ್ದು, ಶೇಕಡ ೨೨೩ರಷ್ಟು ಹೆಚ್ಚಿನ ಮಳೆ ಬಿದ್ದಿರುವ ಕಾರಣ ನಾಳೆವರೆಗೂ ಜಿಲ್ಲೆಯಲ್ಲಿ ಆರೆಂಜ್ ಅಲರ್ಟ್ ಘೋಷಿಸಲಾಗಿದೆ ಎಂದು ಯಾದಗಿರಿ ಜಿಲ್ಲಾಧಿಕಾರಿ ಕಚೇರಿ ತಿಳಿಸಿದೆ.  ಮುಂದಿನ ೪೮ ಗಂಟೆಗಳ ಕಾಲ ಭೀಮಾ ನದಿಯಲ್ಲಿ ಒಳ ಹರಿವಿನಿಂದ ನದಿ ತೀರದ ಪ್ರದೇಶಗಳಲ್ಲಿ ಪ್ರವಾಹದ ಅಪಾಯ ಕಂಡು ಬರುವ ಸಾಧ್ಯತೆ ಇರಲಿದೆ. ಭೀಮಾನದಿ, ಸನ್ನತಿ ಹಾಗೂ ಯಾದಗಿರಿ ಬ್ರಿಡ್ಜ್ ಕಂ ಬ್ಯಾರೇಜ್ ನ ಒಳ ಹರಿವು ೪ಲಕ್ಷದ

೨೦ ಸಾವಿರ ಕ್ಯೂಸೆಕ್ಸ್ ಹಾಗೂ ಹೊರ ಹರಿವು ೪ ಲಕ್ಷದ ೨೦ ಸಾವಿರ ಕ್ಯೂಸೆಕ್ ನೀರು ಹರಿಯುತ್ತಿದೆ.

<><><>

ಇಂದು ಉತ್ತರನಾಡು ಹಾಗೂ ಕರಾವಳಿಯ ಹಲವೆಡೆ ವ್ಯಾಪಕ ಮಳೆಯಾಗಿದೆ. ಕರಾವಳಿ ಜಿಲ್ಲೆಗಳಲ್ಲಿ ಇಂದಿನಿಂದ ಅಕ್ಟೋಬರ್ ಮೂರರವರೆಗೆ ವ್ಯಾಪಕ ಮಳೆಯಾಗಲಿದೆ ಎಂದು ಹವಮಾನ ಇಲಾಖೆ ತಿಳಿಸಿದೆ. ಉತ್ತರ ಕನ್ನಡ ಹಾಗೂ ಉಡುಪಿ ಜಿಲ್ಲೆಯಲ್ಲಿ ಬಾರೀ ಮಳೆಯಾಗುವ ಸಾಧ್ಯತೆ ಇದೆ. ಬೆಂಗಳೂರಿನಲ್ಲಿ ಇಂದು ಹಾಗೂ ನಾಳೆ ಕೆಲವೆಡೆ ಹಗುರವಾಗಿ ಮಳೆಯಾಗಲಿದೆ. ರಾಜ್ಯದ ಉತ್ತರ ಒಳನಾಡಿನಲ್ಲಿ ಆರೆಂಜ್ ಅಲರ್ಟ್ ಘೋಷಿಸಲಾಗಿದೆ.

<><><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ, ದೇಶ-ವಿದೇಶಗಳಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೬ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಈ ಕಾರ್ಯಕ್ರಮವನ್ನು ಕೇಳಬಹುದಾಗಿದೆ.

<><><>

ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದ ಸರ್ಕಾರವು ಪರಿವರ್ತನೆ ಮತ್ತು ಪ್ರಗತಿಯನ್ನು ತರಲು ಅವಿಶ್ರಾಂತವಾಗಿ ಶ್ರಮಿಸುತ್ತಿದೆ. ಇಂದು, ಈ ವಿಶೇಷ ಸರಣಿ - 'ಸೇವಾ ಪರ್ವ್' ನಲ್ಲಿ, ಇತಿಹಾಸವನ್ನು ಸಂರಕ್ಷಿಸುವ, ದೇಶಭಕ್ತಿಯನ್ನು ಪ್ರೇರೇಪಿಸುವ ಮತ್ತು ಪೀಳಿಗೆಗಳನ್ನು ತ್ಯಾಗದ ಮನೋಭಾವದೊಂದಿಗೆ ಸಂಪರ್ಕಿಸುವ ಸ್ಮಾರಕಗಳನ್ನು ನಿರ್ಮಿಸುವ ಮೂಲಕ ಮೋದಿ ಸರ್ಕಾರವು ಭಾರತದ ಕಾಲಾತೀತ ಪರಂಪರೆ ಮತ್ತು ವೀರರನ್ನು ಗೌರವಿಸಿದೆ. ಸ್ವಾತಂತ್ರ್ಯ ಹೋರಾಟಗಾರರು, ಚಿಂತಕರು ಮತ್ತು ತ್ಯಾಗ ಮತ್ತು ದೃಷ್ಟಿಕೋನದ ಮೂಲಕ ತನ್ನ ಭವಿಷ್ಯವನ್ನು ರೂಪಿಸುವ ಪರಂಪರೆಯ ರಕ್ಷಕರು. ನರೇಂದ್ರ ಮೋದಿ ಸರ್ಕಾರವು ಭಾರತದ ಕಾಲಾತೀತ ಪರಂಪರೆ ಮತ್ತು ಅದರ ವೀರರನ್ನು ಸಾಂಪ್ರದಾಯಿಕ ಸ್ಮಾರಕಗಳು ಮತ್ತು ರಾಷ್ಟ್ರೀಯ ಹೆಮ್ಮೆಯ ಸಂಕೇತಗಳ ಮೂಲಕ ಆಚರಿಸಿದೆ. ಪ್ರಧಾನಿ ಮೋದಿ ನೇತೃತ್ವದಲ್ಲಿ, ಅಸ್ತಿತ್ವದಲ್ಲಿರುವ ಸ್ಮಾರಕಗಳನ್ನು ಪುನರುಜ್ಜೀವನಗೊಳಿಸಲಾಗಿದೆ ಮತ್ತು ಹೊಸದನ್ನು ನಿರ್ಮಿಸಲಾಗಿದೆ ಎಂದು ಪ್ರಧಾನಿ ತಿಳಿಸಿದ್ದಾರೆ.

<><><>

ಗದಗ ಜಿಲ್ಲೆಯ ನೆಲ ಐತಿಹಾಸಿಕ ಪ್ರವಾಸಿ ತಾಣವಾಗಿದೆ ಎಂದು ಪ್ರವಾಸೋದ್ಯಮ ಇಲಾಖೆ ಸಚಿವ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ್ ತಿಳಿಸಿದ್ದಾರೆ. ಪ್ರವಾಸೋದ್ಯಮ ಇಲಾಖೆ ವತಿಯಿಂದ ಮಹಾತ್ಮಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವ ವಿದ್ಯಾಲಯದಲ್ಲಿ ನಡೆದ ವಿಶ್ವ ಪ್ರವಾಸೋದ್ಯಮ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಗದಗದಲ್ಲಿ ರಾಜ್ಯ ಸರ್ಕಾರದಿಂದ ೧ ಸಾವಿರದ ೨೦೦ ಪ್ರವಾಸಿ ತಾಣಗಳನ್ನು ಗುರುತಿಸಲಾಗಿದೆ. ಅದರಲ್ಲಿ ೪೮ ತಾಣಗಳು ಗದಗ ಜಿಲ್ಲೆಯಲ್ಲಿವೆ ಎನ್ನುವುದು ಹೆಮ್ಮೆಯಾಗಿದೆ. ಲಕ್ಕುಂಡಿ ಐತಿಹಾಸಿಕ ವಿಶ್ವ ಪಾರಂಪರಿಕ ಸ್ಥಳ ಅಂತ ಯುನೆಸ್ಕೋ ಶೀಘ್ರದಲ್ಲಿ ಗುರುತಿಸಲಿದೆ ಎಂದು ಹೇಳಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>